ದಿನಾಂಕಃ 23.01.2026 ರಂದು ಸಾಕ್ಷಿಯನ್ನು ಪುನಃ ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**<u>ಪಾಟೀ ಸವಾಲು : ಅರ್ಜಿದಾರರ ಪರ ವಕೀಲರಿಂದಃ</u>**

ನಮ್ಮ ವಾಹನದ ವಿರುದ್ಧ ಪೊಲೀಸರು ತನಿಖೆ ನಡೆಸಿ ಅಂತಿಮ ವರದಿಯನ್ನು ಸಲ್ಲಿಸಿರುತ್ತಾರೆ ಎಂದರೆ ಸರಿ, ಸಾಕ್ಷಿಯು ಮುಂದುವರೆದು ಅವರು ಸರಿಯಾಗಿ ತನಿಖೆ ಮಾಡಿಲ್ಲ ಎನ್ನುತ್ತಾರೆ. ಕ್ರಿಮಿನಲ್ ಪ್ರಕರಣ ಈಗಲೂ ಚಾಲ್ತಿಯಲ್ಲಿದೆ ಎಂದರೆ ಸರಿ. ಅಂತಿಮ ವರದಿಯನ್ನು ಪ್ರಶ್ನಿಸಿ ಅರ್ಜಿ ಸಲ್ಲಿಸಿಲ್ಲ ಎಂದರೆ ಸರಿ.

**2.** ನೀವು ದೂರು ಕೊಟಟಿರುತ್ತೀರಾ ಎಂದರೆ ಸಾಕ್ಷಿ ನಮ್ಮ ವಾಹನ ಅವರ ವಾಹನಕ್ಕೆ ಅಪಘಾತವನ್ನೇ ಮಾಡಿಲ್ಲ, 4ನೇ ದಿನದ ನಂತರ ನಮಗೆ ದೂರಿನ ಬಗ್ಗೆ ಗೊತ್ತಾಗಿರುತ್ತದೆ, ಹಾಗಾಗಿ ನಾನು ದೂರು ಕೊಟ್ಟಿಲ್ಲ. ಪೊಲೀಸರು ದೊಡ್ಡ ವಾಹನದವರು ದೂರು ನೀಡಿದರೆ ತೆಗೆದುಕೊಳ್ಳುವುದಿಲ್ಲ ಎಂದು ತಿಳಿಸಿದರು ಎಂದು ಹೇಳುತ್ತಾರೆ. ನಾನು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಅಪಘಾತ ಮಾಡಿ ವಾಹನವನ್ನು ಸ್ಥಳದಲ್ಲಿ ನಿಲ್ಲಿಸದೇ ಹೋಗಿರುತ್ತೇನೆ ಎಂದರೆ ಸುಳ್ಳು. ಸಾಕ್ಷಿಯು ಮುಂದುವರೆದು ಆ ರೀತಿ ಅಪಘಾತವಾದರೇ ನಮ್ಮ ವಾಹನವನ್ನು ಬಸ್ಸಿನಲ್ಲಿರುವವರು ಅಥವಾ ರಸ್ತೆಯಲ್ಲಿರುವವರು ತಡೆದು ನಿಲ್ಲಿಸುತ್ತಾರೆ, ಹಾಗಾಗಿ ನಮ್ಮ ವಾಹನದಿಂದ ಯಾವುದೇ ಅಪಘಾತವಾಗಿಲ್ಲ ಎನ್ನುತ್ತಾರೆ. ಅರ್ಜಿದಾರರಿಗೆ ಪರಿಹಾರ ಕೊಡಬೇಕಾಗುತ್ತದೆ ಎಂದು ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ, ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ : ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಈ ದಿನ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಓದಲಾಗಿದೆ.

**ಪ್ರಧಾನ ಹಿರಿಯ ಸಿಜೆ ಮತ್ತು**
**ಎಂ.ಎ.ಸಿ.ಟಿ., ಶ್ರೀರಂಗಪಟ್ಟಣ.**

**ಸಾಕ್ಷಿದಾರರ ಸಹಿ.**